# ಗ್ರಾಪಂ ಗ್ರಂಥಾಲಯಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ

**ಕಾರವಾರ:** ಕಾರವಾರ ತಾಲೂಕಿನ ಹೊಟೆಗಾಳಿ, ಹೊನ್ನಾವರ ತಾಲೂಕಿನ ಮಂಕಿ ಸಿ (ಚಿತ್ತಾರ), ಮಾಗೋಡ, ಕುಮಟಾ ತಾಲೂಕಿನ ಸೊಪ್ಪಿನಹೊಸಳ್ಳಿ, ಶಿರಸಿ ತಾಲೂಕಿನ ಸೋಂದಾ, ಹಳಿಯಾಳ ತಾಲೂಕಿನ ತಟ್ಟಿಗೇರಿ, ಬಿ.ಕೆ. ಹಳ್ಳಿ, ಸಿದ್ದಾಪುರ ತಾಲೂಕಿನ ತಂಡಾಗುಂಡಿ, ಅಂಕೋಲಾ ತಾಲೂಕಿನ ಮೊಗಟಾ ಗ್ರಾಪಂಗಳ ಗ್ರಂಥಾಲಯಗಳಲ್ಲಿ ಖಾಲಿ ಇರುವ ಗ್ರಾಪಂ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ತಾತ್ಕಾಲಿಕವಾಗಿ ಮಾಸಿಕ ಗೌರವ ಸಂಭಾವನೆ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಆಯಾ ಗ್ರಾಪಂ ಕಾರ್ಯಾಲಯದಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಪಟ್ಟ ಗ್ರಾಪಂ ಅಭಿವೃದ್ಧಿ ಅಧಿಕಾರಿ ಕಚೇರಿಗೆ ಮಾ. 20ರೊಳಗೆ ಸಲ್ಲಿಸಬೇಕು. ಮೀಸಲಾತಿ, ವಿದ್ಯಾರ್ಹತೆ, ವಯೋಮಿತಿ ಹಾಗೂ ಇತರೆ ಹೆಚ್ಚಿನ ಮಾಹಿತಿಗಾಗಿ ಉಪ ಕಾರ್ಯದರ್ಶಿ(ಆಡಳಿತ) ಹಾಗೂ ಸದಸ್ಯ ಕಾರ್ಯದರ್ಶಿ, ಗ್ರಾಪಂ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಮೇಲ್ವಿಚಾರಕರ ನೇಮಕಾತಿ ಸಮಿತಿ, ಜಿಪಂ ಉತ್ತರ ಕನ್ನಡ ಅವರನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.